ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 12-6-2017

# ಪತ್ರಿಕಾ ಪ್ರಕಟಣೆ

## ವಿಧಾನಸಭೆಯಲ್ಲಿ ಇಂದು:

## ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ

ಬೆಂಗಳೂರು, ಜೂನ್ 12 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ದಿನಾಂಕ: 11-04-2015 ರಿಂದ ಪ್ರಾರಂಭಿಸಿ ದಿನಾಂಕ: 30-05-2015 ರಂದು ಪೂರ್ಣಗೊಳಿಸಲಾಗಿದೆ ಎಂದು ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಹೆಚ್. ಆಂಜನೇಯ ಅವರು ತಿಳಿಸಿದರು.

ಇಂದು ವಿಧಾನ ಪರಿಷತ್ತಿನಲ್ಲಿ ಪ್ರಶ್ನೋತ್ತರ ವೇಳೆಯಲ್ಲಿ ಮಾತನಾಡುತ್ತಾ ಸಮೀಕ್ಷೆಯ ಗಣತಿ ಕಾರ್ಯವನ್ನು ನಿರ್ವಹಿಸಲು ಶಿಕ್ಷಣ ಇಲಾಖೆಯ ಶಿಕ್ಷಕರನ್ನು ಗಣತಿದಾರರನ್ನಾಗಿ ನೇಮಕ ಮಾಡಿಕೊಳ್ಳಲಾಗಿತ್ತು. ಸಮೀಕ್ಷಾ ಕಾರ್ಯ ಉಸ್ತುವಾರಿ ಮತ್ತು ಮೇಲ್ವಿಚಾರಣೆ ಮಾಡಲು ಕಂದಾಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಪೌರಾಡಳಿತ, ನಗರಾಭಿವೃದ್ಧಿ, ಆರ್ಥಿಕ ಮತ್ತು ಸಾಂಖ್ಯಿಕ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳ ಸೇವೆಯನ್ನು ಬಳಸಿಕೊಳ್ಳಲಾಗಿದೆ ಎಂದು ಸದನಕ್ಕೆ ತಿಳಿಸಿದರು.

ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಅಂಕಿ-ಅಂಶಗಳ ಕ್ರೋಢಿಕರಣವು ಪೂರ್ಣಗೊಂಡಿರುತ್ತದೆ. ವರದಿ ಸಿದ್ಧಪಡಿಸುವ ಕಾರ್ಯ ಅಂತಿಮ ಹಂತದಲ್ಲಿದ್ದು ವರದಿಯನ್ನು ಆಯೋಗವು ಸರ್ಕಾರಕ್ಕೆ ಸಲ್ಲಿಸಿದ ನಂತರ ಜಾತಿ/ಉಪ ಜಾತಿಗಳ ಪೂರ್ಣ ಮಾಹಿತಿಯು ಲಭ್ಯವಾಗಲಿದೆ ಎಂದು ಸದಸ್ಯರಿಗೆ ತಿಳಿಸಿದರು.

ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗಾಗಿ ಇಲ್ಲಿಯವರೆಗೆ 148.74 ಕೋಟಿ ರೂ. ಗಳನ್ನು ವೆಚ್ಚ ಮಾಡಲಾಗಿದೆ ಎಂದರು.

ಎಸ್‌ಎಂ:ಜೆಡಿ:ಕೆಎನ್‌ವಿ:ಜಿಪಿಆರ್.

# ಮಾರಾಟವಾಗುವ ಆಹಾರ ಪದಾರ್ಥಗಳನ್ನು ನಿರಂತರ ತಪಾಸಣೆ

ಬೆಂಗಳೂರು, ಜೂನ್ 12 (ಕರ್ನಾಟಕ ವಾರ್ತೆ)

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕ್ಷೇತ್ರ ಮಟ್ಟದ ಅಧಿಕಾರಿಗಳು ತಮ್ಮ ತಮ್ಮ ಕ್ಷೇತ್ರಗಳಲ್ಲಿ ಮಾರಾಟವಾಗುವ ಆಹಾರ ಪದಾರ್ಥಗಳನ್ನು ನಿರಂತರವಾಗಿ ತಪಾಸಣೆ ನಡೆಸುತ್ತಿದ್ದಾರೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಕೆ.ಆರ್. ರಮೇಶ್ ಕುಮಾರ್ ತಿಳಿಸಿದರು.

ಇಂದು ಪರಿಷತ್‌ನಲ್ಲಿ ಸದಸ್ಯ ಕ್ಯಾಪ್ಟನ್ ಗಣೇಶ್ ಕಾರ್ಣಿಕ್ ಕೇಳಿದ ಪ್ರಶ್ನೆಗೆ ಉತ್ತರಿಸುತ್ತಾ, ಸಂಶಯಾಸ್ಪದ ಆಹಾರ ಪದಾರ್ಥಗಳ ಮಾದರಿಗಳನ್ನು ಸಂಗ್ರಹಿಸಿ ಸಂಬಂಧಪಟ್ಟ ಆಹಾರ ಪ್ರಯೋಗಾಲಯಗಳಿಗೆ ವಿಶ್ಲೇಷಣೆ ಸಲ್ಲಿಸಿ, ವರದಿ ಅನ್ವಯ ಕಾನೂನಿನಡಿಯಲ್ಲಿ ಸೂಕ್ತಕ್ರಮ ಕೈಗೊಳ್ಳುತ್ತಿದ್ದಾರೆ ಎಂದು ಸದಸ್ಯರಿಗೆ ತಿಳಿಸಿದರು.

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ 2006 ಕೇಂದ್ರ ಸರ್ಕಾರದ ಕಾಯ್ದೆಯಾಗಿದ್ದು, ರೈತರ ಆಹಾರ ಪದಾರ್ಥಕ್ಕೆ ಬಗ್ಗೆ ಭಾರತ ಸರ್ಕಾರದ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ ನಿರ್ಧರಿಸಬೇಕಾಗಿರುತ್ತದೆ ಎಂದು ಸದನಕ್ಕೆ ತಿಳಿಸಿದರು.

ಪ್ಲಾಸ್ಟಿಕ್ ಸಕ್ಕರೆ, ಪ್ಲಾಸಿಕ್ ಅಕ್ಕಿ, ಪ್ಲಾಸ್ಟಿಕ್ ರಾಗಿ ಹಾಗೂ ಪ್ಲಾಸ್ಟಿಕ್ ಮೊಟ್ಟೆಗಳ ಸರಬರಾಜು ಮಾಡಲಾಗುತ್ತಿದೆ ಎಂದು ಮಾಧ್ಯಮಗಳಲ್ಲಿ ವಿಸ್ತೃತವಾಗಿ ಪ್ರಕಟಗೊಂಡಿದೆ, ಅದರೆ ವಾಸ್ತವಾಗಿ, ವೈಜ್ಞಾನಿಕವಾಗಿ ಈ ರೀತಿ ಕೃತಕ ಆಹಾರ ಪದಾರ್ಥಗಳು ಬಳಕೆಯಾಗುತ್ತಿಲ್ಲ ಮತ್ತು ಮಾರುಕಟ್ಟೆಯಲ್ಲಿ ಮಾರಾಟವಾಗುತ್ತಿಲ್ಲ. ಆದ್ದರಿಂದ ಸಾರ್ವಜನಿಕರು ಯಾವುದೇ ರೀತಿಯ ಭಯಪಡುವಂತಿಲ್ಲ ಎಂದು ಸದನದ ಮೂಲಕ ಸಚಿವರು ತಿಳಿಸಿದರು.

ಎಸ್‌ಎಂ:ಜೆಡಿ:ಕೆಎನ್‌ವಿ:ಜಿಪಿಆರ್.

# ವಿಧಾನ ಪರಿಷತ್ತಿನಲ್ಲಿ ಇಂದು:

**ಬೆಂಗಳೂರು, ಜೂನ್ 12 (ಕರ್ನಾಟಕ ವಾರ್ತೆ)**

ಶಾಸಕ ಕೆ.ಎಸ್. ಪುಟ್ಟಣ್ಣಯ್ಯನವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಜವಳಿ ಮತ್ತು ಮುಜರಾಯಿ ಸಚಿವರು ಮಂಡ್ಯ ಜಿಲ್ಲೆಯ ಮೇಲುಕೋಟೆಯ ಚೆಲುವನಾರಾಯಣಸ್ವಾಮಿ ಮತ್ತು ಯೋಗಾನರಸಿಂಹ ದೇವಾಲಯಗಳು ರಾಜ್ಯ ಪುರಾತತ್ವ ಇಲಾಖೆಗೆ ಸೇರಿದ ಸಂರಕ್ಷಿತ ದೇವಾಲಯಗಳಾಗಿರುತ್ತವೆ. ಚೆಲುವನಾರಾಯಣಸ್ವಾಮಿ ದೇವಾಲಯದ ರಕ್ಷಣೆಗೆ ಕಬ್ಬಿಣದ ಗ್ರಿಲ್‌ಗಳಿಂದ ಕೂಡಿದ ಚಿಕ್ಕದಾದ ತಡೆಗೋಡೆಗಳನ್ನು, ಕೇಂದ್ರ ಪುರಾತತ್ವ ಇಲಾಖೆಯಿಂದ ನಿರ್ಮಿಸಲಾಗುತ್ತಿದ್ದು ಕಾಮಗಾರಿ ಪ್ರಗತಿಯಲ್ಲಿದೆ. ಮೇಲುಕೋಟೆಗೆ ಆಗಮಿಸುವ ಭಕ್ತಾದಿಗಳ ಅನುಕೂಲಕ್ಕಾಗಿ ಕುಡಿಯುವ ನೀರು, ಶೌಚಾಲಯ, ಪಾರ್ಕಿಂಗ್ ವ್ಯವಸ್ಥೆ ಮುಂತಾದ ಮೂಲಕಭೂತ ಸೌಕರ್ಯಗಳನ್ನು ಕಲ್ಪಿಸಲಾಗುತ್ತಿದೆ. ಚೆಲುವನಾರಾಯಣ ಸ್ವಾಮಿ ದೇವಾಲಯದ ಹಿಂದೆ ಮತ್ತು ದೊಡ್ಡಕಲ್ಯಾಣಿಯ ಹತ್ತಿರ ಹೈಟೆಕ್ ಶೌಚಾಲಯ ಕಾಮಗಾರಿ ಪ್ರಗತಿಯಲ್ಲಿದೆ ಎಂದರು.

ಶಿರಸಿ ಶಾಸಕ ವಿಶ್ವೇಶ್ವರ ಹೆಗಡೆ ಕಾಗೇರಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಕಂದಾಯ ಸಚಿವ ಕಾಗೋಡು ತಿಮ್ಮಪ್ಪ, ರಾಜ್ಯದಲ್ಲಿ ಅಟಲ್‌ಜೀ ಜನಸ್ನೇಹಿ ಕೇಂದ್ರಗಳಲ್ಲಿ ಒಟ್ಟು 1148 ನೌಕರರು ಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿದ್ದು, ವಿವಿಧ ಸೇವೆಗಳಿಗಾಗಿ ಪಡೆಯುವ ಶುಲ್ಕದಿಂದ ಅವರಿಗೆ ವೇತನ ನೀಡಲಾಗುತ್ತಿದೆ. ಸದರಿ ಡಾಟಾ ಎಂಟ್ರಿ ಆಪರೇಟರ್‌ಗಳು ಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿರುವುದರಿಂದ ಅವರ ಸೇವೆಯನ್ನು ಖಾಯಂಗೊಳಿಸಲು ನಿಯಮಾವಳಿಗಳಲ್ಲಿ ಯಾವುದೇ ಅವಕಾಶ ಇರುವುದಿಲ್ಲ ಎಂದರು.

ಕಳೆದ 3 ವರ್ಷಗಳಿಂದ ಯೋಜನಾ ಮತ್ತು ಕ್ರೀಡಾ ಇಲಾಖೆಯಿಂದ ಕ್ರೀಡೆಗೆ ಉತ್ತೇಜನ ನೀಡುವ ಸಲುವಾಗಿ ನಗದು ಪರಸ್ಕಾರ, ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿ, ಏಕಲವ್ಯ ಪ್ರಶಸ್ತಿ, ಕ್ರೀಡಾ ವಿದ್ಯಾರ್ಥಿ ವೇತನ, ಯುವ ಕ್ರೀಡಾ ಸಂಜೀವಿನಿ ವಿಮಾ ಯೋಜನೆ, ಗ್ರಾಮೀಣ ಪ್ರದೇಶದಲ್ಲಿ ಕ್ರೀಡೆಗೆ ಉತ್ತೇಜನ ನೀಡಲು 'ಯುವ ಕ್ರೀಡಾ ಮಿತ್ರ' ಗ್ರಾಮೀಣ ಕ್ರೀಡೋತ್ಸವ, ಗರಡಿಮನೆ ನಿರ್ಮಾಣ ಮುಂತಾದ ಯೋಜನೆಗಳನ್ನು ಜಾರಿಗೊಳಿಸಲಾಗಿದೆ ಮತ್ತು ಕೋಚ್‌ಗಳ ವೇತನವನ್ನು ಗಮನಾರ್ಹವಾಗಿ ಹೆಚ್ಚಿಸಲಾಗಿದೆ ಎಂದರು.

ಅರಸೀಕೆರೆ ಶಾಸಕ ಶಿವಲಿಂಗೇಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಕಾರ್ಮಿಕ ಸಚಿವ ಸಂತೋಷ್ ಲಾಡ್, 2017–18 ರ ರಾಜ್ಯ ಬಜೆಟ್‌ನಲ್ಲಿ 'ರಾಜ್ಯ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನಾ ಪರಿಷ್ಕೃತ ಕ್ರಿಯಾ ಯೋಜನೆ ಮೂಲಕ ಮುಂದಿನ 5 ವರ್ಷಗಳೊಳಗೆ ಕರ್ನಾಟಕವನ್ನು ಬಾಲ ಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ವ್ಯವಸ್ಥೆ ಮುಕ್ತ ರಾಜ್ಯವನ್ನಾಗಿ ಘೋಷಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಅದರ ಅನುಷ್ಠಾನಕ್ಕಾಗಿ ಕ್ರಿಯಾ ಯೋಜನೆಯನ್ನು ರಾಷ್ಟ್ರೀಯ ಕಾನೂನು ಶಾಲೆ ಸಹಯೋಗದೊಂದಿಗೆ ರೂಪಿಸಲಾಗುತ್ತದೆ, ಬಾಲ ಕಾರ್ಮಿಕರ ಪದ್ಧತಿ ನಿರ್ಮೂಲನೆಗಾಗಿ 2017–18 ನೇ ಸಾಲಿನಲ್ಲಿ ರೂ 520 ಲಕ್ಷ ಅನುದಾನ ನಿಗಧಿಪಡಿಸಲಾಗಿದೆ. ಕಾರ್ಮಿಕ ಇಲಾಖೆಯಲ್ಲಿ ಬಾಲ ಕಾರ್ಮಿಕ ಸಹಾಯವಾಣಿ ಸಂಖ್ಯೆ 080–22453549 ಅನ್ನು ಸ್ಥಾಪಿಸಲಾಗಿದೆ. ಬಾಲ ಕಾರ್ಮಿಕರ ಸಮಸ್ಯೆ ಮತ್ತು ಪರಿಹಾರ ವ್ಯವಸ್ಥೆಯ ಮಾಹಿತಿವುಳ್ಳ ಮೊಬೈಲ್ ಆ್ಯಪ್ ಸಿದ್ದಪಡಿಸಲು ಕ್ರಮ ಕೈಗೊಳ್ಳಲಾಗಿದೆ. ಪರಿಷ್ಕೃತ ಕಾಯ್ದೆ ಅನ್ವಯ ಬಾಲ ಕಾರ್ಮಿಕರನ್ನು ದುಡಿಸಿಕೊಳ್ಳುವುದು ಕಲಂ 14 (ಎ) ಅನ್ವಯ ಅಪರಾಧವಾಗಿದ್ದು, ಆ ನಿಟ್ಟಿನಲ್ಲಿ ಮೊದ್ದಮೆ ಹೂಡಲು ಪೊಲೀಸ್ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಪ್ರಸ್ತುತ 13 ಜಿಲ್ಲೆಗಳಲ್ಲಿ ಬಾಲ ಕಾರ್ಮಿಕ ವಿಶೇಷ ಪುನರ್ವಸತಿ ತರಬೇತಿ ಕೇಂದ್ರಗಳನ್ನು ನಡೆಸಲಾಗುತ್ತಿದೆ ಎಂದರು.

## ನಗರಕ್ಕೆ ಉಪ ರಾಷ್ಟ್ರಪತಿ

ಬೆಂಗಳೂರು, ಜೂನ್ 12 (ಕರ್ನಾಟಕ ವಾರ್ತೆ)

ಇಂದು ಬೆಳಿಗ್ಗೆ ನಗರದ ಹೆಚ್.ಎ.ಎಲ್. ವಿಮಾನ ನಿಲ್ದಾಣಕ್ಕೆ ಆಗಮಿಸಿದ ಉಪ ರಾಷ್ಟ್ರಪತಿ ಹಮೀದ್ ಹನ್ಸಾರಿ ಅವರನ್ನು ರಾಜ್ಯಪಾಲ ವಜುಭಾಯಿ ವಾಲ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬರಮಾಡಿಕೊಂಡರು.

ಈ ಸಂದರ್ಭದಲ್ಲಿ ಗೃಹ ಸಚಿವ ಡಾ: ಜಿ. ಪರಮೇಶ್ವರ್ ಸೇರಿದಂತೆ ಹಲವಾರು ಸಚಿವರು, ಗಣ್ಯರು ಉಪಸ್ಥಿತರಿದ್ದರು.

ಉಪ ರಾಷ್ಟ್ರಪತಿ ನಿರ್ಗಮನ:

ಉಪ ರಾಷ್ಟ್ರಪತಿ ಹಮೀದ್ ಅನ್ಸಾರಿ ಅವರು ಇಂದು ಮಧ್ಯಾಹ್ನ ಬೆಂಗಳೂರಿನ ಹೆಚ್.ಎ.ಎಲ್. ವಿಮಾನ ನಿಲ್ದಾಣದಿಂದ ನವ ದೆಹಲಿಗೆ ತೆರಳಿದರು.

ಈ ಸಂದರ್ಭದಲ್ಲಿ ಸಚಿವ ರೋಷನ್ ಬೇಗ್ ಹಾಗೂ ಸರ್ಕಾರದ ಮುಖ್ಯ ಕಾರ್ಯದರ್ಶಿ ಸುಭಾಷ್ ಚಂದ್ರ ಕುಂಟಿಆ ಅವರು ಸೇರಿದಂತೆ ಹಲವಾರು ಗಣ್ಯರು ಉಪಸ್ಥಿತರಿದ್ದರು.

## ಮುಕ್ತ ಸಮಾಜಕ್ಕೆ ಸ್ವತಂತ್ರ ಮಾಧ್ಯಮ ಅಗತ್ಯ

ಬೆಂಗಳೂರು, ಜೂನ್ 12 (ಕರ್ನಾಟಕ ವಾರ್ತೆ)

ಮುಕ್ತ ಸಮಾಜಕ್ಕೆ ಸ್ವತಂತ್ರ ಮಾಧ್ಯಮ ಪ್ರಯೋಜನಕಾರಿ ಮಾತ್ರವಲ್ಲ ಅವಶ್ಯಕ ಕೂಡ. ಪತ್ರಿಕಾ ಸ್ವಾತಂತ್ರ್ಯಕ್ಕೆ ಧಕ್ಕೆ ಆದರೆ ನಾಗರಿಕರ ಹಕ್ಕುಗಳಿಗೂ ಅಪಾಯ ಎದುರಾಗುತ್ತದೆ ಎಂದು ಉಪ ರಾಷ್ಟ್ರಪತಿ ಹಮೀದ್ ಅನ್ಸಾರಿ ಅವರು ಇಂದು ಅಭಿಪ್ರಾಯಪಟ್ಟರು.

ನಗರದ ಅಂಬೇಡ್ಕರ್ ಭವನದಲ್ಲಿ ಏರ್ಪಡಿಸಿದ್ದ ಸಮಾರಂಭದಲ್ಲಿ ನ್ಯಾಷನಲ್ ಹೆರಾಲ್ಡ್ ಪತ್ರಿಕೆಯ ವಿಶೇಷ ಸ್ಮರಣ ಸಂಚಿಕೆ ಬಿಡುಗಡೆ ಮಾಡಿ ಅವರು ಮಾತನಾಡಿದರು. ಪತ್ರಿಕಾ ರಂಗ ಹಾಗೂ ಸಮಾಜದ ಸುಗಮ ಕಾರ್ಯನಿರ್ವಹಣೆಗಾಗಿ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದಕ್ಕೆ ಸಂವಿಧಾನದಲ್ಲಿ ಅವಕಾಶ ಕಲ್ಪಿಸಲಾಗಿದೆ. ಆದರೆ ನಾಗರಿಕರ ಹಕ್ಕುಗಳ ರಕ್ಷಣೆ ಹಾಗೂ ಉತ್ತೇಜನಕ್ಕೆ ನೆರವಾಗಬಲ್ಲ ಮಾಹಿತಿ ಪ್ರಕಟಣೆಗೆ ತಡೆವೊಡ್ಡುವಂತಿಲ್ಲ. ಮಾಧ್ಯಮ ರಂಗದ ನೈಜ ಉದ್ದೇಶ ಸಾಧನೆಗಾಗಿ ಈ ರೀತಿ ಮಾಡುವುದು ಅಗತ್ಯ ಎಂದು ಅವರು ಅಭಿಪ್ರಾಯಪಟ್ಟರು.

ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಪತ್ರಿಕೋದ್ಯಮ ಮಹತ್ವದ ಪಾತ್ರ ವಹಿಸಿದೆ. ರಾಷ್ಟ್ರೀಯತೆಯ ಜಾಗೃತಿಗೆ ಪತ್ರಿಕೆಗಳು ಪ್ರಮುಖ ಸಾಧನವಾಗಿದ್ದವು. ವಿವಿಧ ವಿಷಯಗಳ ಕುರಿತು ಜನಜಾಗೃತಿ ಮೂಡಿಸುವಲ್ಲಿ ಪತ್ರಿಕೆಗಳು ಪ್ರಮುಖ ಪಾತ್ರ ವಹಿಸಿದ್ದವು. 6 ಪತ್ರಿಕೆಗಳ ಜೊತೆ ಸಹಯೋಗ ಹೊಂದಿದ್ದ ಗಾಂಧೀಜಿ ಅವರು ಎರಡು ಪ್ರಭಾವಿ ಪತ್ರಿಕೆಗಳ ಸಂಪಾದಕರಾಗಿದ್ದರು. ಅವರ ಪ್ರಕಾರ ಪತ್ರಿಕೋದ್ಯಮ ಒಂದು ಸಾರ್ವಜನಿಕ ಸಂಸ್ಥೆಯಾಗಿತ್ತು. ಜೀವನೋಪಾಯಕ್ಕಾಗಿ ಪತ್ರಿಕೆ ನಡೆಸುವುದು ತಪ್ಪು ಎನ್ನುವುದು ಅವರ ಸ್ಪಷ್ಟ ಅಭಿಪ್ರಾಯವಾಗಿತ್ತು ಎಂದು ಅವರು ಸ್ಮರಿಸಿದರು.

ನೆಹರೂ ಅವರ ಪತ್ರಿಕಾ ಧರ್ಮ ಗಾಂಧೀಜಿ ಅವರ ಮೌಲ್ಯಗಳಿಂದ ಪ್ರಭಾವಿತರಾಗಿದ್ದರು. ಮಾಧ್ಯಮ ಪ್ರಜಾಪ್ರಭುತ್ವದ ಆಧಾರ ಸ್ತಂಭವೆಂದು ಭಾವಿಸಿದ್ದ ಅವರು ಪತ್ರಕರ್ತರ ಹಿತಾಸಕ್ತಿ ಕಾಪಾಡಲು ಬಹಳಷ್ಟು ಕೊಡುಗೆ ನೀಡಿದ್ದಾರೆ. ಕಾರ್ಯನಿರತ ಪತ್ರಕರ್ತರ ಕಾಯ್ದೆ ಅವರದ್ದೆ ಕೊಡುಗೆಯಾಗಿದೆ. ಆದರೆ ಇಂದು ಮಾಧ್ಯಮ ಕ್ಷೇತ್ರದಲ್ಲಿ ಅಲ್ಪಾವಧಿಯ ಗುತ್ತಿಗೆಗಳು ವ್ಯಾಪಕವಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಮಾಧ್ಯಮಗಳು ತನ್ನ ಅಧಿಕಾರವನ್ನು ಸಮರ್ಪಕವಾಗಿ ಬಳಸುವ ನಿಟ್ಟಿನಲ್ಲಿ ಹೆಚ್ಚಿನ ಹೊಣೆಗಾರಿಕೆ ಹೊಂದಿವೆ ಎಂದು ಅವರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನ್ಯಾಷನಲ್ ಹೆರಾಲ್ಡ್ ಪತ್ರಿಕೆಯು ಪತ್ರಿಕಾ ಸ್ವಾತಂತ್ರ್ಯವನ್ನು ಎತ್ತಿ ಹಿಡಿದಿದ್ದು ಸ್ವಾತಂತ್ರ್ಯ ಹೋರಾಟದ ಅವಧಿಯಲ್ಲಿ ಭಾರತದ ದನಿಯಾಗಿತ್ತು ಎಂದು ಬಣ್ಣಿಸಿದರು.

ಈ ಪತ್ರಿಕೆಯನ್ನು ಕಟ್ಟಿ ಬೆಳೆಸಿದ ದೇಶದ ಮೊದಲ ಪ್ರಧಾನಿ ಜವಾಹರಲಾಲ್ ನೆಹರೂ ಅವರು ಪತ್ರಿಕೆಯು ಯಾವುದೇ ರಾಜಕೀಯ ಪಕ್ಷದ ಪ್ರಭಾವಕ್ಕೊಳಗಾಗಬಾರದು ಎಂದು ಬಯಸಿದ್ದರು. ಅವರು ಪ್ರಧಾನಿಯಾದಾಗ ಪತ್ರಿಕೆ ಆಡಳಿತ ಮಂಡಳಿಯ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಪತ್ರಿಕೆಯ ಸಂಪಾದಕರೊಂದಿಗೆ ನಿಕಟ ಸಂಪರ್ಕದಲ್ಲಿದ್ದರೂ ಅವರ ಪತ್ರಿಕೆಯ ಸಂಪಾದಕೀಯ ನೀತಿಯಲ್ಲಿ ಮಧ್ಯಪ್ರವೇಶ ಮಾಡುತ್ತಿರಲಿಲ್ಲ ಎಂದು ಮುಖ್ಯಮಂತ್ರಿಗಳು ಸ್ಮರಿಸಿಕೊಂಡರು.

ಸಂಸದ ರಾಹುಲ್ ಗಾಂಧಿ, ಕೆ.ಪಿ.ಸಿ.ಸಿ. ಅಧ್ಯಕ್ಷ ಡಾ: ಜಿ. ಪರಮೇಶ್ವರ, ರಾಜ್ಯಸಭಾ ಸದಸ್ಯ ಪತ್ರಿಕೆಯ ನಿರ್ದೇಶಕ ಮಂಡಳಿಯ ಸದಸ್ಯ ಆಸ್ಕರ್ ಫರ್ನಾಂಡೀಸ್ ಸ್ವಾಗತಿಸಿದರು. ನ್ಯಾಷನಲ್ ಹೆರಾಲ್ಡ್ ಪತ್ರಿಕೆಯ ಸಂಪಾದಕ ನೀಲಾಬ್ ಮಿಶ್ರಾ ವಂದಿಸಿದರು. ಕರ್ನಾಟಕ ರಾಜ್ಯಪಾಲ ವಜುಭಾಯಿ ವಾಲ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಜೂನ್ 21 ರವರೆಗೆ ಅಧಿವೇಶನ ವಿಸ್ತರಣೆ

**ಬೆಂಗಳೂರು, ಜೂನ್ 12 (ಕರ್ನಾಟಕ ವಾರ್ತೆ)**

ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಮತ್ತು ನಡಾವಳಿಕೆಗಳ ನಿಯಮಾವಳಿಗಳ 363 ರ ನಿಯಮದಲ್ಲಿ ಪ್ರದತ್ತವಾದ ಅಧಿಕಾರವನ್ನು ಉಪಯೋಗಿಸಿ ದಿನಾಂಕ: 16-06-2017 ರವರಗೆ ನಿಗದಿಯಾಗಿದ್ದ ವಿಧಾನಸಭಾ ಅಧಿವೇಶವನ್ನು ದಿನಾಂಕ: 21-06-2017 ರವರೆಗೆ ವಿಸ್ತರಣೆ ಮಾಡಲಾಗಿದೆ ಎಂದು ವಿಧಾನಸಭಾಧ್ಯಕ್ಷರಾದ ಕೆ.ಬಿ. ಕೋಳಿವಾಡ ಸದನದಲ್ಲಿ ತಿಳಿಸಿದರು.

ಎಸ್‌ಎಂ:ಕೆಎನ್‌ಕೆ:ಜೆಡಿ:ಜಿಪಿಆರ್.

## ವಿವಿಧ ಬೋಧಕ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆ – ಕೀ ಉತ್ತರ ವೆಬ್‌ಸೈಟ್‌ನಲ್ಲಿ ಪ್ರಕಟ

ಬೆಂಗಳೂರು, ಜೂನ್ 12, (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಆಯುಷ್ ಇಲಾಖೆಯ ಆಯುಷ್ ವೈದ್ಯಕೀಯ ಕಾಲೇಜುಗಳಲ್ಲಿನ ವಿವಿಧ ಬೋಧಕ ಹುದ್ದೆಗಳ ನೇಮಕಾತಿಗಾಗಿ ಇತ್ತೀಚೆಗೆ ಬೆಂಗಳೂರು ಕೇಂದ್ರದಲ್ಲಿ ಆನ್‌ಲೈನ್ (ಸಿಬಿಆರ್‌ಟಿ) ಮೂಲಕ ನಡೆಸಿದ ಸ್ಪರ್ಧಾತ್ಮಕ ಪರೀಕ್ಷೆಗಳ ನಿರ್ದಿಷ್ಟ ಪತ್ರಿಕೆಯ ಕೀ ಉತ್ತರಗಳನ್ನು ಆಯೋಗದ ಅಂತರ್ಜಾಲದಲ್ಲಿ **"http://kpsc.kar.nic.in/Key Answers"** ನಲ್ಲಿ ಜೂನ್ 9 ರಂದು ಪ್ರಕಟಿಸಿದೆ.

ಕೀ ಉತ್ತರಗಳ ಕುರಿತಂತೆ ಆಕ್ಷೇಪಣೆಗಳನ್ನು ಸಲ್ಲಿಸುವ ಅಭ್ಯರ್ಥಿಗಳು ಅದನ್ನು ಪುಷ್ಟೀಕರಿಸುವ ಆಧಾರಗಳುಳ್ಳ ಪುಸ್ತಕಗಳ ಹೆಸರು, ಲೇಖಕರ ಹೆಸರು, ಪ್ರಕಾಶನದ ಪ್ರತಿ, ವಿಷಯ, ಪ್ರಶ್ನೆ ಸಂಖ್ಯೆ ಇತ್ಯಾದಿ ವಿವರಗಳು ಹಾಗೂ ಪ್ರತಿ ಪ್ರಶ್ನೆಗೆ ರೂ 50 ರ ಶುಲ್ಕದೊಂದಿಗೆ (ಐಪಿಒ/ಡಿಡಿ ಮೂಲಕ) "ಪರೀಕ್ಷಾ ನಿಯಂತ್ರಕರು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು – 560 001" ಇವರಿಗೆ ನಿಗದಿತ ನಮೂನೆಯಲ್ಲಿ ಜೂನ್ 19 ರೊಳಗೆ (ಕಚೇರಿ ವೇಳೆಯಲ್ಲಿ) ಲಿಖಿತ ಮನವಿಯ ಮೂಲಕ (ದ್ವಿಪ್ರತಿಯಲ್ಲಿ) ಸಲ್ಲಿಸಬಹುದಾಗಿದೆ. ಜೂನ್ 19 ರ ನಂತರ ಬರುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕರ್ನಾಟಕ ಲೋಕಸೇವಾ ಅಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್

## ವಿವಿಧ ಹುದ್ದೆಗಳಿಗೆ ಸಂದರ್ಶನ

ಬೆಂಗಳೂರು, ಜೂನ್ 12 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಆಯಾ ಹುದ್ದೆಗಳ ನೇಮಕಾತಿಗಾಗಿಆಯೋಗದ ಕೇಂದ್ರ ಕಚೇರಿ, ಬೆಂಗಳೂರು ಇಲ್ಲಿ ಆಯಾ ಹುದ್ದೆಗಳ ಮುಂದೆ ಸೂಚಿಸಿದ ದಿನಾಂಕಗಳಲ್ಲಿ ಸಂದರ್ಶನ ನಡೆಯಲಿದೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಹಾಗೂ ಅಧೀಕ್ಷರ ಹುದ್ದೆಗಳ ಸಂದರ್ಶನವನ್ನು ಜೂನ್ 19 ರಂದು ಬೆಳಿಗ್ಗೆ 9.30 ಗಂಟೆಗೆ ಮತ್ತು ಮಧ್ಯಾಹ್ನ 2–30 ಗಂಟೆಗೆ ನಡೆಸಲಿದೆ.

ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಪ್ರಾಂಶುಪಾಲರು ಹುದ್ದೆಗಳ ಸಂದರ್ಶನವನ್ನು ಜೂನ್ 19 ರಂದು ಬೆಳಿಗ್ಗೆ 9–30 ಗಂಟೆಗೆ ಹಾಗೂ ಪೊಲೀಸ್ ಇಲಾಖೆಯ ನ್ಯಾಯ ವಿಜ್ಞಾನ ಪ್ರಯೋಗಾಲಯಗಳಲ್ಲಿ ವೈಜ್ಞಾನಿಕ ಅಧಿಕಾರಿ ಹುದ್ದೆಗಳ ಸಂದರ್ಶನವನ್ನು ಜೂನ್ 19 ರಂದು ಮದ್ಯಾಹ್ನ 2.30 ಗಂಟೆಗೆ ನಡೆಸಲಿದೆ.

ಕನ್ನಡ ಮತ್ತು ಇಲಾಖೆಯ ಉಪ ನಿರ್ದೇಶಕರ ಹುದ್ದೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಂರಕ್ಷಣಾಧಿಕಾರಿ ಹುದ್ದೆಗಳ, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯದ ಸಹಾಯ ನಿರ್ದೇಶ ಹುದ್ದೆ, ಕೈಮಗ್ಗ ಮತ್ತು ಜವಳಿ ಇಲಾಖೆಯ ಸಹಾಯಕ ನಿರ್ದೇಶಕರ ಹುದ್ದೆ ಹಾಗೂ ಕೈಮಗ್ಗ ಮತ್ತು ಜವಳಿ ಇಲಾಖೆಯ ಜವಳೀ ಪ್ರವರ್ಧನಾಧಿಕಾರಿ ಹುದ್ದೆಗಳ ಸಂದರ್ಶನವನ್ನು ಜೂನ್ 19 ರಂದು ಬೆಲಿಗ್ಗೆ 9–30 ಗಂಟೆಗೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಸಂರಕ್ಷಣಾಧಿಕಾರಿಗಳ ಹುದ್ದೆಗಳ ಸಂದರ್ಶನವನ್ನು ಜೂನ್ 20 ರಂದು ಮಧ್ಯಾಹ್ನ 2–30 ಗಂಟೆಗೆ ಸಂದರ್ಶನ ನಡೆಸಲಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

ಎಸ್‌ಎಂ:ಕೆಎನ್‌ಕೆ:ಜೆಡಿ:ಜಿಪಿಆರ್.

## ಪ್ರವೇಶ ಪತ್ರ

**ಬೆಂಗಳೂರು, ಜೂನ್ 12 (ಕರ್ನಾಟಕ ವಾರ್ತೆ)**

ದಿನಾಂಕ:15.06.2017ರಿಂದ 24.06.2017ರವರೆಗೆ ನಡೆಯುವ ಕರ್ನಾಟಕ ಮುಕ್ತ ಶಾಲೆ–ಕೆ.ಓ.ಎಸ್ ಪೂರಕ ಪರೀಕ್ಷೆಯ ಪ್ರವೇಶ ಪತ್ರಗಳನ್ನು ರಾಜ್ಯದ ಎಲ್ಲಾ ಕರ್ನಾಟಕ ಮುಕ್ತ ಶಾಲೆ–ಕೆ.ಓ.ಎಸ್ ಕಲಿಕಾ ಕೇಂದ್ರಗಳಿಗೆ ಜಿಲ್ಲಾ ಡಯಟ್ ಪ್ರಾಂಶುಪಾಲರ ಮುಖಾಂತರ ಕಳುಹಿಸಲಾಗಿದೆ. ವಿದ್ಯಾರ್ಥಿಗಳು ಸಂಬಂಧಿಸಿದ ಕರ್ನಾಟಕ ಮುಕ್ತ ಶಾಲೆ ಕಲಿಕಾ ಕೇಂದ್ರಗಳಿಂದ ಪ್ರವೇಶ ಪತ್ರಗಳನ್ನು ಪಡೆದುಕೊಳ್ಳುವಂತೆ, ನಿರ್ದೇಶಕರು(ಇತರೆ ಪರೀಕ್ಷೆಗಳು) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# <u>ಫಲಿತಾಂಶ ಪ್ರಕಟ</u>

**ಬೆಂಗಳೂರು, ಜೂನ್ 12 (ಕರ್ನಾಟಕ ವಾರ್ತೆ)**

ರಾಷ್ಟ್ರೀಯ ಶಿಶಿಕ್ಷು ತರಬೇತಿ ಯೋಜನೆಯಡಿಯಲ್ಲಿ 105 ನೇ ಏಪ್ರಿಲ್ –2017ನ ರಲ್ಲಿ ರಾಜ್ಯದ 17 ಪರೀಕ್ಷಾ ಕೇಂದ್ರಗಳಲ್ಲಿ ನಡೆದ ಅಖಿಲ ಭಾರತ ವೃತ್ತಿ ಪರೀಕ್ಷೆ(ಶಿಶಿಕ್ಷು)ಯ (ಹಿಂದಿನ ಪರೀಕ್ಷೆಯಲ್ಲಿ ಅನುತ್ತೀರ್ಣರಾಗಿದ್ದ ತರಬೇತಿದಾರರ) ಫಲಿತಾಂಶವನ್ನು ಸಂಬಂಧಪಟ್ಟ ಪರೀಕ್ಷಾ ಕೇಂದ್ರಗಳಲ್ಲಿ, ಹಾಗೂ ವಿಭಾಗೀಯ ಕಛೇರಿಗಳಲ್ಲಿ ಹಾಗೂ ಅಂತರ್ಜಾಲ **www.emptrg.kar.nic.in** ನಲ್ಲಿ ಪ್ರಕಟಿಸಲಾಗಿದೆ. ಅಂಕಪಟ್ಟಿಗಳನ್ನು ಪಡೆಯಲು ಜೂನ್ 30 , 2017 ರ ನಂತರ ಆಯಾ ಪರೀಕ್ಷಾ ಕೇಂದ್ರಗಳ ಪ್ರಾಚಾರ್ಯರನ್ನು ಸಂಪರ್ಕಿಸಬಹುದು.

# <u>ಉತ್ತಮ ಸಾಧನೆ</u>

**ಬೆಂಗಳೂರು, ಜೂನ್ 12 (ಕರ್ನಾಟಕ ವಾರ್ತೆ)**

ನ್ಯಾಷನಲ್ ಇನ್ಸ್‌ಟಿಟ್ಯೂಟ್ ಆಫ್ ಒಪನ್ ಸ್ಕೂಲಿಂಗ್ ಸಂಸ್ಥೆಯ ಬೆಂಗಳೂರು ಕೇಂದ್ರದ ವಿದ್ಯಾರ್ಥಿಗಳು ಸಿ.ಬಿ.ಎಸ್.ಸಿ. 12 ನೇ ತರಗತಿಯಲ್ಲಿ ಉತ್ತಮ ಸಾಧನೆ ಮಾಡಿದ್ದಾರೆ.

ಯಲಹಂಕದ ವಿದ್ಯಾರ್ಥಿ ಅಸುತೋಷ್ ಪಾಂಡೆ, ಶೇ. 91.6, ಮಂಗಳೂರಿನ ಸುಹಾ ಷರೀಫ್ ಶೇ. 90.20 ಹಾಗೂ ದಿವ್ಯಾಂಗ ವಿದ್ಯಾರ್ಥಿಗಳಾದ ಬೆಂಗಳೂರಿನ ಕುಮಾರಿ ಪೂಜಾ ಶೇ. 84.60 ಮತ್ತು ಕ್ರಿಷ್ಟಿನ್ ಶೇ. 82.20 ಅಂಕಗಳನ್ನು ಪಡೆದಿದ್ದಾರೆ ಎಂದು ನ್ಯಾಷನಲ್ ಇನ್ಸ್‌ಟಿಟ್ಯೂಟ್ ಆಫ್ ಒಪನ್ ಸ್ಕೂಲಿಂಗ್ ಸಂಸ್ಥೆಯ ಬೆಂಗಳೂರು ಕೇಂದ್ರದ ರಿಜಿನಲ್ ಡೈರೆಕ್ಟರ್ ಎಸ್.ಚಂದ್ರಶೇಖರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# Admission Ticket

**Bangalore, June 12 (Karnataka Information)**

Admission tickets for Karnataka Open School-K.O.S Supplementary Examination to be conducted from 15.06.2017 to 24.06.2017 by Karnataka Secondary Education Examination Board (Other Exams)have been dispatched to all the Karnataka Open School-K.O.S Study Centers through concern District DIET Principal. Students are informed to collect the same from the concerned Karnataka Open School-K.O.S Study Centres as per the statement of Director(Other Exams), Karnataka Secondary Education Examination Board, Bangalore.

## Dak Adalat

**Bangalore, June 12 (Karnataka Information)**

A Dak Adalat will be held at Ground Floor, Jayanagar Head Post Office Building, 11th Main, 4th T Block , Bengaluru 560 041 at 11.00 hours on June 20, 2017. Grievances or complaints relating to postal services like delay in transmission of mails, speed post articles, parcels, money orders, savings bank, cash certificates and counter services, if any pertaining to Bengaluru South Division may be sent to the Senior Superintendent of Post Offices, Bengaluru South Division, Bengaluru 560 041 for discussion in the Adalat.